## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸನ್ಮಾನ್ಯ ಮುಖ್ಯಮಂತ್ರಿಗಳು, ಭಾರತ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಸವಿನೆನಪಿಗಾಗಿ ದಿನಾಂಕ:15ನೇ ಆಗಸ್ಟ್ 2021ರ ಭಾಷಣದಲ್ಲಿ ಅಮೃತ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಘೋಷಣೆ ಮಾಡಿರುವ ಕುರಿತು.

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 17 ಕೌಗುಇ 2021, ದಿ:08.03.2021

*******

ಪ್ರಸ್ತಾವನೆ:

2021-22ನೇ ಸಾಲಿನಲ್ಲಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳಿಸುತ್ತಿರುವ ಕೌಶಲ್ಯ ಅಭಿವೃದ್ಧಿ ಮಿಷನ್ ಯೋಜನೆಯಡಿ ವೇತನ ಇತ್ಯಾದಿ ಬಾಬ್ತುಗಳನ್ನು ಹೊರತುಪಡಿಸಿ ಒಟ್ಟು 32725 ಯುವಜನತೆಗೆ ಕೌಶಲ್ಯ ತರಬೇತಿಯನ್ನು ನೀಡಲು ಒಟ್ಟು ರೂ.49.09 ಕೋಟಿಗಳ ಅನುದಾನವಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಇತರ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತ 29500 ಅಭ್ಯರ್ಥಿಗಳಿಗೆ ವಿವಿಧ ವೃತ್ತಿಗಳಲ್ಲಿ ಕೌಶಲ್ಯ ತರಬೇತಿ ನೀಡಬೇಕಾಗಿದೆ. ಈಗಾಗಲೇ ತರಬೇತಿ ನೀಡಲು ಸರ್ಕಾರಿ ಹಾಗೂ ಖಾಸಗಿ ತರಬೇತುದಾರ ಸಂಸ್ಥೆಗಳಿಗೆ ಕಾರ್ಯದೇಶವನ್ನು ಹೊರಡಿಸಲಾಗಿದೆ.

ಪ್ರತಸ್ಮಧ್ಯ ಸನ್ಮಾನ್ಯ ಮುಖ್ಯಮಂತ್ರಿಗಳು, ಭಾರತ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಸವಿನೆನಪಿಗಾಗಿ 15ನೇ ಆಗಸ್ಟ್ 2021ರ ಭಾಷಣದಲ್ಲಿ ಅಮೃತ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಘೋಷಣೆ ಮಾಡಿರುತ್ತಾರೆ. ಈ ಘೋಷಣೆಯಂತೆ ರಾಜ್ಯದ ಒಟ್ಟು 75000 ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತ ಅಭ್ಯರ್ಥಿಗಳಿಗೆ 2 ವರ್ಷದ ಕಾಲಾವಧಿಯಲ್ಲಿ ಒಟ್ಟು ರೂ.112.00 ಕೋಟಿಗಳ ವೆಚ್ಚದಲ್ಲಿ ಕೌಶಲ್ಯ ತರಬೇತಿ ನೀಡಲು ಉದ್ದೇಶಿಸಲಾಗಿದೆ.

ಉಲ್ಲೇಖಿದಲ್ಲಿನ ಸರ್ಕಾರಿ ಆದೇಶದನ್ವಯ ಕಳೆದ ಆರ್ಥಿಕ ವರ್ಷದಲ್ಲಿ ರೂ.23.00 ಕೋಟಿಗಳನ್ನು ಕೌಶಲ್ಯ ತರಬೇತಿ ನೀಡಲು ಕೆ.ಎಸ್.ಡಿ.ಸಿ.ಗೆ ಅನುದಾನ ಬಿಡುಗಡೆಗೊಳಿಸಲಾಗಿದ್ದು ಸದರಿ ಅನುದಾನವು ಲಭ್ಯವಿರುವುದು. ಪ್ರಸ್ತುತ ವರ್ಷದಲ್ಲಿ ಲಭ್ಯವಿರುವ ಒಟ್ಟು ರೂ.52.59 ಕೋಟಿಗಳಲ್ಲಿ ಕಳೆದ ವರ್ಷದ ಬಿಲ್ಲುಗಳನ್ನು ಪಾವತಿಸಲು ರೂ.3.50 ಕೋಟಿಗಳ ಅನುದಾನ ಅವಶ್ಯಕತೆ ಇದ್ದು ಉಳಿದ ರೂ.49.09 ಕೋಟಿಗಳ ವೆಚ್ಚದಲ್ಲಿ 32726 ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಬೇಕಾಗಿರುತ್ತದೆ. ಅಮೃತ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ರೂ.57.69 ಕೋಟಿಗಳ ವೆಚ್ಚದಲ್ಲಿ 38460 ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತ ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಲು ಉದ್ದೇಶಿಸಲಾಗಿದೆ. ಇನ್ನುಳಿದ 36540 ಅಭ್ಯರ್ಥಿಗಳಿಗೆ ಮುಂದಿನ ಆರ್ಥಿಕ ವರ್ಷದಲ್ಲಿ ತರಬೇತಿಯನ್ನು ಕೈಗೊಳ್ಳಲಾಗುವುದು. ಆದುದರಿಂದ ಈ ಆದೇಶ.

### ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 164 ಕೌಗುಇ 2021 (ಭಾಗ-2) ಬೆಂಗಳೂರು, ದಿನಾಂಕ: 18.08.2021

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ 2021-22ನೇ ಸಾಲಿನಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು, ಭಾರತ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಸವಿನೆನಪಿಗಾಗಿ 15ನೇ ಆಗಸ್ಟ್ 2021ರ ಭಾಷಣದಲ್ಲಿ ಅಮೃತ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಪ್ರಸ್ತುತ ಸಾಲಿನಲ್ಲಿ ತರಬೇತಿಗೆ ಒದಗಿಸಿದ ಅನುದಾನ ಹಾಗೂ ಕಳೆದ ಸಾಲಿನಲ್ಲಿ ಕೆ.ಎಸ್.ಡಿ.ಸಿ.ಯಲ್ಲಿ ಲಭ್ಯವಿರುವ ಒಟ್ಟು ತರಬೇತಿ ಅನುದಾನ ರೂ.57.69 ಕೋಟಿಗಳ ವೆಚ್ಚದಲ್ಲಿ ಒಟ್ಟು 38460 ಪರಿಶಿಷ್ಟ ಜಾತಿ / ಪರಿಶಿಷ್ಟ

SDEL/164/SSM/2021-SKILL-SKILL-SDEL

900970/2021/SEC-SKILL-SDEL

ಪಂಗಡ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತ ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿ ನೀಡಲು ಆದೇಶಿಸಿದೆ. ಸದರಿ ವೆಚ್ಚವನ್ನು ಕೌಶಲ್ಯ ಅಭಿವೃದ್ಧಿ ಮಿಷನ್ ಪ್ರಸಕ್ತ ಸಾಲಿನ ಲೆಕ್ಕಶೀರ್ಷಿಕೆ 2230-02-101-0-09 ರಡಿ ಹಾಗೂ ಸರ್ಕಾರಿ ಆದೇಶ ಸಂಖ್ಯೆ: ಕೌಉಜೀಇ 17 ಕೌಗುಇ 2021, ದಿ:08.03.2021 ರಡಿ ಲಭ್ಯವಿರುವ ಅನುದಾನದಲ್ಲಿ ಸಿ.ಎಂ.ಕೆ.ಕೆ.ವೈ. ಮಾರ್ಗಸೂಚಿಯನುಸಾರ ಅನುಷ್ಠಾನಗೊಳಿಸುವುದು. ಇನ್ನುಳಿದ 36540 ಅಭ್ಯರ್ಥಿಗಳಿಗೆ ಮುಂದಿನ ಆರ್ಥಿಕ ವರ್ಷದಲ್ಲಿ ತರಬೇತಿಯನ್ನು ಕೈಗೊಳ್ಳಲು ಸೂಚಿಸಿದೆ.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 475 ವೆಚ್ಚ-9 2021, ದಿನಾಂಕ:18.08.2021ರ ಸಹಮತಿ ಅನುಸಾರ ಹಾಗೂ ಯೋಜನಾ ಇಲಾಖೆಯ ಸಹಮತಿ ಸಂಖ್ಯೆ: PDS 68 MED 2021, ದಿನಾಂಕ:18.08.2021 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಾರುತಿ ಪ್ರಸನ್ನ ಹೆ.ಪಿ)
ಸರ್ಕಾರದ ಉಪ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ

ಇವರಿಗೆ:

1) ಮಹಾಲೇಖಪಾಲರು (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ), ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯ, ಬೆಂಗಳೂರು.
3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಕೌಶಲ್ಯ ಭವನ, ಬೆಂಗಳೂರು.
4) ಮಿಷನ್ ನಿರ್ದೇಶಕರು, ಜೀವನೋಪಾಯ, ಬೆಂಗಳೂರು.
5) ಆಂತರಿಕ ಆರ್ಥಿಕ ಸಲಹೆಗಾರರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7) ನಿರ್ದೇಶಕರು, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8) ಉಪ ನಿರ್ದೇಶಕರು, ಖಜಾನೆ ಎನ್.ಎಂ.ಸಿ., ಖನಿಜ ಭವನ, ರೇಸ್‌ಕೋರ್ಸ್ ರೋಡ್, ಬೆಂಗಳೂರು.
9) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3&9), ವಿಧಾನಸೌಧ, ಬೆಂಗಳೂರು.
10) ಮಾನ್ಯ ಸಚಿವರು ಉನ್ನತ ಶಿಕ್ಷಣ, ಐಟಿ-ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ರವರ ಆಪ್ತ ಕಾರ್ಯದರ್ಶಿಯವರು.
11) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
12) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
13) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.